ಅಸಲು ದಾವಾ ಸಂಖ್ಯೆ- **157/2023** ಪಿ.ಡಬ್ಲ್ಯೂ:- **1**

ದಿನಾಂಕಃ **31-01-2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲು:- ಪ್ರತಿವಾದಿ ಪರ ವಕೀಲರಿಂದ:-

ನಾನು ಮತ್ತು 1 ನೇ ಪ್ರತಿವಾದಿ ನನ್ನ ತಂದೆ ಈಗ ಒಟ್ಟಿಗೆ ಇದ್ದೇವೆ. ನಾನು ಮತ್ತು ನಮ್ಮತಂದೆಯವರು ನಮ್ಮ ಕುಟುಂಬ ಆಸ್ತಿಗಳಿಗೆ ಸಂಬಂಧಪಟ್ಟಂತೆ ಏನೇ ವ್ಯವಹಾರ ಮಾಡಿದರೂ ಒಬ್ಬರಿಗೊಬ್ಬರು ಗೊತ್ತಾಗುತ್ತದೆ ಎಂದರೆ ಸರಿ. ಕುಟುಂಬದ ಆಸ್ತಿಗಳಿಗೆ ಬ್ಯಾಂಕಿನಲ್ಲಿ ಸಾಲವನ್ನು ಪಡೆದುಕೊಳ್ಳುವ ಪೂರ್ವದಲ್ಲಿ ಗೊತ್ತಾಗುತ್ತದೆ ಎಂದರೆ ಸರಿ. ನಮ್ಮ ತಂದೆಯವರು ಏನೇ ವ್ಯವಹಾರ ಮಾಡಿದರು ನನ್ನ ಗಮನಕ್ಕೆ ತರುತ್ತಾರೆ. ದಾವಾ ಐಟಂ ನಂ.1 ರ ಆಸ್ತಿಯನ್ನು ನಮ್ಮ ತಂದೆಯವರು 3 ನೇ ಪ್ರತಿವಾದಿಗೆ ಮಾರಾಟ ಮಾಡುವ ವಿಚಾರವನ್ನು ತಿಳಿಸಿ ಮಾರಾಟ ಮಾಡಿರುತ್ತಾರೆ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಯು ದಾವಾ ಐಟಂ ನಂ.1 ರ ಆಸ್ತಿಯನ್ನು 3 ನೇ ಪ್ರತಿವಾದಿಗೆ ಮಾರಾಟ ಮಾಡುವ ಸಮಯದಲ್ಲಿ ನಾನು ನನ್ನ ಒಪ್ಪಿಗೆ ಮತ್ತು ಸಮ್ಮತಿಯನ್ನು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಯು ನನ್ನ ನನ್ನ ಒಪ್ಪಿಗೆ ಮತ್ತು ಸಮ್ಮತಿಯನ್ನು ಪಡೆದುಕೊಂಡು ದಾವಾ ಐಟಂ ನಂ.1 ರ ಆಸ್ತಿಯನ್ನು 3 ನೇ ಪ್ರತಿವಾದಿಗೆ ಮಾರಾಟ ಮಾಡಿದ್ದಾರೆ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಯು ದಾವಾ ಐಟಂ ನಂ.1 ರ ಆಸ್ತಿಯನ್ನು 3 ನೇ ಪ್ರತಿವಾದಿಗೆ ರೂ.70,000/- ಕ್ಕೆ ಮಾರಾಟ ಮಾಡಿ ಸದರಿ ಹಣವನ್ನು ನನಗೆ ಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ನಮ್ಮ ಜಮೀನುಗಳ ಅಭಿವೃದ್ದಿಗೋಸ್ಕರ ಮತ್ತು ನಮ್ಮ ಕುಟುಂಬದ ಆರ್ಥಿಕ ಸಮಸ್ಯೆಗಳನ್ನು ಪರಿಹರಿಸಿಕೊಳ್ಳುವ ಸಲುವಾಗಿ ನಾನೇ 1 ನೇ ಪ್ರತಿವಾದಿಯ ಮೂಲಕ ದಾವಾ ಐಟಂ ನಂ.1 ರ ಆಸ್ತಿಯನ್ನು 3 ನೇ ಪ್ರತಿವಾದಿಗೆ ಮಾರಾಟ ಮಾಡಿದ್ದೇವೆ ಎಂದರೆ ಸರಿಯಲ್ಲ. ಮೇಲ್ಕಂಡ ವಿಚಾರ ನನಗೆ ಗೊತ್ತಿದ್ದರೂ ಸಹ 3 ನೇ ಪ್ರತಿವಾದಿಗೆ ಮೋಸ ಮಾಡುವ ಉದ್ದೇಶದಿಂದ ಮತ್ತು ದಾವಾ ಐಟಂ ನಂ.1 ರ

ಆಸ್ತಿಯನ್ನು ಕಬಳಿಸುವ ಉದ್ದೇಶದಿಂದ ಸುಳ್ಳು ದಾವೆಯನ್ನು ಸಲ್ಲಿಸಿ ಮತ್ತು ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮುಂದುವರೆದ ಪಾಟೀ ಸವಾಲಿಗೆ ಕಾಲಾವಕಾಶಕೋರಿದ್ದು ನೀಡಿ ಮುಂದೂಡಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.